ಎಂದು ಹಲುಬುತ್ತಿದ್ದರು. 'ಸರ್, ಗ್ಲೂಕೋಮಾ ಆಗ್ಯಾದರಿ. ಬ್ಲೀಡಿಂಗ್ ಇಳದು ಕೆಂಪಂದ್ರ ಬೀಟರೂಟ್ ಕೆತ್ತಿಟ್ಟಂಗ ಆಗ್ಯಾದ ಕಣ್ಣು. ಬಲಗಣ್ಣ ಗಪ್ಪಾಗ್ಯದ. ಎಡಗಣ್ಣು ಅಲ್ಲಲ್ಲಿ ಬೆಳಕೈತಿ. ಈಗ ಅದೂ ಹೋಗಕತ್ತೈತಿ. ಶುಗರ್ ನ್ಯೂರೋಪತಿ. ಎರಡೂ ಕಾಲು ಡೆಡ್ ಆಗ್ಯಾವ. ಏನೇನಾಕ್ಕತೊ ಯಾರಿಗ್ಗೊತ್ತು? ಒಟ್ಟ ತಲೀ ಅಂತೂ ಚುರಕೈತಿ. ಒಮ್ಮೆ ಬರ್ರಿ. ಕಣ್ಣೊಳಗ ಬೆಳಕಿರುವಂಗೆ ನಿಮ್ಮನ್ನೂ ಬಾನುವನ್ನೂ ನೋಡಬೇಕು' ಎಂದು ಕರೆಯುತಿದ್ದರು.

ನಾನೂ ಬಾನೂ ಕಳೆದ ವರ್ಷದ ನವೆಂಬರ್ 8ರಂದು ಬದಾಮಿಗೆ ಹೋದೆವು. ಅವರೊಟ್ಟಿಗೆ ಒಂದು ದಿನವಿದ್ದೆವು. ಆಗ ನಡೆದ ಮಾತುಕತೆಯಿದು. ಈ ಮಾತುಕತೆಯಲ್ಲಿರುವ ತಲ್ಲಣಗಳು ಬಾಯರಿಯವರವು ಮಾತ್ರವಲ್ಲ; ಬಡತನ, ಸಂಪ್ರದಾಯ, ಕಾಯಿಲೆ, ಅಭದ್ರತೆಯೊಳಗೆ ಪಾಡು ಪಡುವ ಎಲ್ಲರವು ಎಂಬಂತೆ ಸಾರ್ವತ್ರೀಕರಣ ಪಡೆದಿವೆ. ಇಲ್ಲಿರುವ ಅಂತರ್‌ಧರ್ಮೀಯ ಮನುಷ್ಯ ಸಂಬಂಧಗಳು, ಕಠೋರ ಸಂಪ್ರದಾಯವು ತನ್ನ ಜಿಗುಟುತನ ಕಳೆದುಕೊಳ್ಳುವ ಮತ್ತು ದುಡಿವ ಜನ ಬದುಕು ಕಟ್ಟಿಕೊಳ್ಳುವ ಚಿತ್ರಗಳು ಅಪೂರ್ವವಾಗಿವೆ. ಇಲ್ಲಿ ಹೊಮ್ಮಿರುವ ಚಿಂತನೆ – ದರ್ಶನ ಬದುಕಿನ ಕುದಿಯೊಳಗಿಂದಲೇ ಮೂಡಿದ್ದು. ಸಾವು ಬದುಕಿರುವ ಎಲ್ಲರೂ ಒಮ್ಮೆ ಮುಖಾಮುಖಿ ಮಾಡಬೇಕಾದ ಸತ್ಯ. ಸಾವಿಗೆ ಮುನ್ನ ಬದುಕಿದ್ದವರು ಆಡುವ ಮಾತು, ಹಂಚಿಕೊಳ್ಳುವ ಅನುಭವ ಮತ್ತು ಚಿಂತನೆಗಳು, ಮುರಿದ ಬದುಕನ್ನು ಕಟ್ಟಿಕೊಳ್ಳುವ ಎಲ್ಲರಿಗೂ ಬೇಕಾದ ಜೀವನತತ್ವವಾಗಿರುತ್ತವೆ.

◆ ನಿಮ್ಮ ಕುಟುಂಬ ಬದಾಮಿಗೆ ಯಾಕಾಗಿ ಬರಬೇಕಾಯಿತು?

ತಾಯಿ ಟಿಬಿಯಾಗಿ 33ನೇ ವಯಸ್ಸಿಗೇ ಹೋಗಿಬಿಟ್ಟಳು. ಅಪ್ಪಯ್ಯ ಐದು ಮಕ್ಕಳನ್ನು ಕರಕೊಂಡು ಇಲ್ಲಿಗೆ ಬಂದರು. ಸಣ್ಣದೊಂದು ಚಾದಂಗಡಿ ಇಟ್ಟರು. ಅವರು ಊರಲ್ಲಿದ್ದಾಗ ಸಾಲಿಗೆ ಹೋಗೊ ಮುಂದ 'ಎಸ್‌ಸಿ ಮಂದಿ ಬಂದಾರ. ಮುಟ್ತಾರ' ಅಂತ ಮನಿಗೆ ಓಡಿ ಬಂದಿದ್ದರಂತ. ಈಗ ಮಂದಿ ಚಾ ಕುಡದ ಕಪ್ಪುಬಸಿ ತೊಳೀತಿದ್ದರು. ಇದರ ಬಗ್ಗೆ ಕೇಳಿದರ, 'ಆ ಕಾಲ ಹಂಗಿತ್ತವ್ವ' ಅನ್ನೋರು. ಮನೀಗೆ ಯಾರಾದರೂ ದಲಿತರು ಬಂದರ ಬ್ಯಾಡ ಅಂತಿದ್ದಿಲ್ಲ. ಧರ್ಮ ಅನ್ನೋದು ಅಡಿಗೆಮನೀಗಷ್ಟೇ ಇರಬೇಕು ಅಂತಿದ್ದರು. ಮುಕ್ತಿಸಾಧನೆಗೆ ಅಂತ ಸಾಧು ಸಂತರು ಜಟಾಧಾರಿಗಳ ಕೂಡ ಅಡ್ಡಾಡತಿದ್ರು. ಅವರನ್ನ ಮನೀಗೆ ಕರಕೊಂಡು ಬಂದಾಗ ನಾವು ಜಗಳವಾಡತಿದ್ವಿ.

◆ ಬದಾಮಿಯ ಮೊದಲ ದಿನಗಳು ಹೇಗಿದ್ದವು?

ಬಜಾರದಾಗ ಒಂದು ಖೋಲಿಯಾಗ ಇದ್ದಿವಿ. ಟಾಯ್ಲೆಟಿಲ್ಲ. ನೀರಿಲ್ಲ. ಆ ಹೊಲಸು ಈಗಲೂ ಕನಸ್ನಾಗ ಕಾಡ್ತದರಿ. ನಮ್ಮಜ್ಜಯ್ಯನ ಮನ್ಯಾಗ ಮೆತ್ತನ್ನ ಅನ್ನ ತಿಂದು ಬೆಳದೋರು. ಬರದಗುಡ್ಡಕ್ಕೆ ಬಂದು ಬಿದ್ದಿದ್ವಿ. ಹೊಲಗೆಲಸ ಮಾಡಾಕೆ ಬರ್ತಿದ್ದಿಲ್ಲ. ಅವರಿವರು ಕೊಟ್ಟ ಒಣಾರೊಟ್ಟಿ ತಿನ್ನಕಾಗ್ತಿದ್ದಿಲ್ಲ. ಸಜ್ಜಿಹಿಟ್ಟು ಕಲಸಿ ದೋಸೆ ಮಾಡ್ತಿದ್ದಿವಿ. ದಂದಕ್ಕಿಯೊಳಗ ದನ ಮೇದುಬಿಟ್ಟ ಜ್ವಾಳದಗಡ್ಡಿ ತಂದು ಒಲೆ ಹಚ್ಚತಿದ್ದಿವಿ. ಎಸ್ಸೆಸ್ಸೆಲ್ಸಿ ಪಿಯುಸಿತನಕ ರೋಡ್‌ಲೈಟಿನೊಳಗ ಓದಿದಿವಿ. ರೋಹಿಣಿಗೆ ಸರ್ಕಾರಿ ನೌಕರಿ ಬರೋತಂಕ ನಾವು ಸರಿಯಾಗಿ ಊಟಾನೇ ಮಾಡಲಿಲ್ಲ.

◆ ಇಲ್ಲಿನ ಜನ ನಿಮ್ಮನ್ನು ಹೇಗೆ ಸ್ವೀಕರಿಸಿದರು?

ಏ, ಬಾಯರಿ ಮೇಡಂ ಅಂದರ ಅಷ್ಟು ಪ್ರೀತಿರಿ. ಒಂದು ಸಲ ಕೊರೊನಾ ಟೈಮನಾಗೆ ನಮ್ಮ ತಮ್ಮ ಬಂದಿದ್ದ. ಪೊಲೀಸರು ಚೆಕ್‌ಪೋಸ್ಟಿನ್ಯಾಗ ತಡದರಂತ, ಮಾಸ್ಕ್ ಹಾಕಿಲ್ಲ ಅಂತ. 'ಇಲ್ರೀ,